# 8. ವೃಕ್ಷಸಾಕ್ಷಿ

**– ದುರ್ಗಸಿಂಹ**

## ಕವಿ – ಕಾವ್ಯ – ಪರಿಚಯ



ದುರ್ಗಸಿಂಹ

**ದುರ್ಗಸಿಂಹ ಕವಿ** ಕಿಸುಕಾಡು ನಾಡಿನ **ಸಯ್ಯಡಿಯಲ್ಲಿ** (ಈಗಿನ ಗದಗ ಜಿಲ್ಲೆಯ ರೋಣ ತಾಲೂಕಿನ ಸವಡಿ) **ಕ್ರಿ.ಶ.ಸು.1031 ಜನಿಸಿದನು.** ಒಂದನೆಯ ಜಗದೇಕಮಲ್ಲನ ಆಸ್ಥಾನದಲ್ಲಿ ದಂಡನಾಯಕನೂ ಸಂಧಿವಿಗ್ರಹಿಯೂ ಆಗಿದ್ದನು. ಮತಧರ್ಮ ಸಮನ್ವಯಕಾರನಾದ ಈತ ಸಯ್ಯಡಿಯಲ್ಲಿ ಹಲವಾರು ಹರಿಹರಭವನಗಳನ್ನು ನಿರ್ಮಿಸಿದನೆಂದು ತಿಳಿದುಬಂದಿದೆ.

ಈತನು **'ಪಂಚತಂತ್ರ'** ಎಂಬ ಕೃತಿಯನ್ನು ರಚಿಸಿದ್ದಾನೆ. ಪಂಚತಂತ್ರದಲ್ಲಿ **ಭೇದ, ಪರೀಕ್ಷಾ, ವಿಶ್ವಾಸ, ವಂಚನಾ ಮತ್ತು ಮಿತ್ರಕಾರ್ಯ** ಎಂಬ ಐದು ತಂತ್ರಗಳನ್ನಾಧರಿಸಿದ 48 ಉಪಕತೆಗಳಿವೆ.

## ಪಾಠದ ಆಶಯ ಭಾವ

ಗುಣಾಢ್ಯನಿಂದ ಪೈಶಾಚಿಕ ಭಾಷೆಯಲ್ಲಿ ರಚಿತವಾದ ಬೃಹತ್ಕಥೆಯನ್ನಾಧರಿಸಿ ವಸುಭಾಗಭಟ್ಟನು ಸಂಸ್ಕೃತದಲ್ಲಿ ಪಂಚತಂತ್ರ ಕೃತಿಯನ್ನು ರಚಿಸಿದ್ದಾನೆ. ಈ ಸಂಸ್ಕೃತ ಕೃತಿಯನ್ನಾಧರಿಸಿ ಕನ್ನಡದಲ್ಲಿ ಪಂಚತಂತ್ರವನ್ನು ಬರೆದಿರುವುದಾಗಿ ದುರ್ಗಸಿಂಹ ಹೇಳಿಕೊಂಡಿದ್ದಾನೆ. **ಪಂಚತಂತ್ರ** ಕೃತಿಯಿಂದ ಆಯ್ದ **ವೃಕ್ಷಸಾಕ್ಷಿ ಕಥೆ**ಯ ಮೂಲಕ ಹಳೆಗನ್ನಡ ಚಂಪೂಕಾವ್ಯವನ್ನು ಪರಿಚಯಿಸುವ ಆಶಯದೊಂದಿಗೆ ವೃಕ್ಷಸಾಕ್ಷಿ ಕಥೆಯು **"ಸತ್ಯಕ್ಕೆ ಸಾವಿಲ್ಲ ಸುಳ್ಳಿಗೆ ಸುಖವಿಲ್ಲ"** ಎಂಬ ನೀತಿಯನ್ನು ಪ್ರತಿಪಾದಿಸುತ್ತದೆ. ಧರ್ಮಬುದ್ಧಿ ಮತ್ತು ದುಷ್ಟಬುದ್ಧಿ ಪಾತ್ರಗಳು ಹೆಸರಿಗೆ ತಕ್ಕಂತೆ ಗುಣವನ್ನು ಹೊಂದಿದ್ದು ಧರ್ಮಬುದ್ಧಿಯ ಪಾತ್ರವು ಸಹನಶೀಲತೆ, ಸುಸಂಸ್ಕೃತ ವ್ಯಕ್ತಿತ್ವವನ್ನು ನಿರೂಪಿಸಿದರೆ ದುಷ್ಟಬುದ್ಧಿಯ ಪಾತ್ರವು ತನ್ನ ವಂಚನೆ, ಕಪಟತನ, ಮೋಸದಿಂದ ತಾನು ಹಾಳಾಗುವುದಲ್ಲದೆ, ಸಂಪತ್ತಿಗಾಗಿ ತನ್ನ ತಂದೆಯನ್ನು ಬಲಿಕೊಡುವ ಹೃದಯಹೀನ ಕೃತ್ಯದಿಂದ **"ಮಾಡಿದುಣ್ಣೊ ಮಾರಾಯ"** ನೀತಿಯಂತೆ ಕೆಟ್ಟ ಫಲವನ್ನು ಅನುಭವಿಸುವಂತಾಗುತ್ತದೆ. ಈ ಕಥೆಯು **"ಹಣಕ್ಕಿಂತ ಗುಣ ಮೇಲು"** ಎಂಬ ಆಶಯವನ್ನು ಪ್ರತಿಪಾದಿಸುತ್ತದೆ.

## ವೃಕ್ಷಸಾಕ್ಷಿ ಪಾಠದ ಸರಳ ಸಾರಾಂಶ

ಮಧುರಾ ನಗರದಲ್ಲಿ ಧರ್ಮಬುದ್ಧಿ, ದುಷ್ಟಬುದ್ಧಿ ಎಂಬ ಇಬ್ಬರು ವ್ಯಾಪಾರಿಗಳ ಮಕ್ಕಳು ಇದ್ದರು. ಅವರು ಜೊತೆಯಲ್ಲಿ ವ್ಯಾಪಾರಕ್ಕಾಗಿ ದೂರದೇಶಕ್ಕೆ ಪ್ರಯಾಣ ಮಾಡಿದರು. ಅಲ್ಲಿ ವ್ಯಾಪಾರ ಮಾಡಿ ಹೆಚ್ಚಿನ ಹೊನ್ನನ್ನು ಸಂಪಾದಿಸಿಕೊಂಡು ಹಿಂತಿರುಗಿ ಬಂದು, ತಮ್ಮ ಹುಟ್ಟಿದ ಸ್ಥಳವಾದ ಮಧುರಾಪುರ ನಗರದ ಹೊರವಲಯದ ಉದ್ಯಾನವನದೊಳಗೆ ಬೀಡುಬಿಟ್ಟರು(ತಂಗಿದರು).



ಅರ್ಧರಾತ್ರಿಯಲ್ಲಿ ಧರ್ಮಬುದ್ಧಿಯು ದುರ್ಬುದ್ಧಿಯುಳ್ಳವನಾದ ದುಷ್ಟಬುದ್ಧಿಯನ್ನು ಕರೆದು ಹೊನ್ನನ್ನು ಹಂಚಿಕೊಳ್ಳೋಣ ಎನ್ನಲು, ದುಷ್ಟಬುದ್ಧಿಯು ಪಾಪಬುದ್ಧಿಯವನಾಗಲು ಯೋಚಿಸಿ ಹೀಗೆ ಹೇಳಿದನು. **"ಈ ಹೊನ್ನನ್ನು ಹಂಚಿಕೊಂಡು ಮನೆಯಲ್ಲಿ ಸ್ವೇಚ್ಛೆಯಿಂದ ಇರುವವರಲ್ಲ. ಮತ್ತೆ ವ್ಯಾಪಾರಕ್ಕಾಗಿ ದೂರದೇಶಕ್ಕೆ ಹೋಗಬೇಕಾಗುತ್ತದೆ. ಆಕಾರಣದಿಂದ ನಿನಗೂ ನನಗೂ ವ್ಯಯಕ್ಕೆ(ಖರ್ಚಿಗೆ) ತಕ್ಕಷ್ಟು ಹೊನ್ನನ್ನು ತೆಗೆದುಕೊಂಡು, ಉಳಿದ ಹೊನ್ನನೆಲ್ಲವನ್ನು ಇಲ್ಲೆಯೇ ಇಡೋಣ"** ಎಂದು ಸಲಹೆಯಿತ್ತನು. ಆಗ ಆ ಧರ್ಮಬುದ್ಧಿಯು ಆ ಪಾಪಕರ್ಮನನ್ನು(ದುಷ್ಟಬುದ್ಧಿ) ತನ್ನ ಆತ್ಮೀಯ ಸ್ನೇಹಿತನೆಂದು ತಿಳಿದು, ಅದಕ್ಕೆ ಒಪ್ಪಿಕೊಂಡು, ದೊಡ್ಡ ಕೊಂಬೆಗಳುಳ್ಳ ಒಂದು ಆಲದ ಮರದ ಪಕ್ಕದಲ್ಲಿ ಹೊನ್ನನ್ನು ಹೂತುಹಾಕಿ, ಮರುದಿವಸ ಇಬ್ಬರು ಮಧುರಾಪಟ್ಟಣವನ್ನು ಹೊಕ್ಕು, ಇಷ್ಟವಾದ ವಿಷಯ ಸುಖಗಳನ್ನು ಅನುಭವಿಸುತ್ತಿದ್ದರು.

ಒಂದು ದಿನ ದುಷ್ಟಬುದ್ಧಿಯು ಧರ್ಮಬುದ್ಧಿಯನ್ನು ಮೋಸಗೊಳಿಸಿ ಹೋಗಿ ಹೂತಿಟ್ಟ ಹೊನ್ನನೆಲ್ಲವನ್ನು ತೆಗೆದುಕೊಂಡು ಕುಳಿಯನ್ನು ಮೊದಲಿನಂತೆ ಮುಚ್ಚಿ, ಕೆಲವಾನು ದಿವಸಗಳನ್ನು ಬಿಟ್ಟು, ತಾನೇ ಧರ್ಮಬುದ್ಧಿಯಲ್ಲಿಗೆ ಬಂದು, ವ್ಯಯಕ್ಕೆ (ಖರ್ಚಿಗೆ) ಹೊನ್ನಿಲ್ಲ. ಇನ್ನು ಸ್ವಲ್ಪ ಹೊನ್ನನ್ನು ತೆಗೆದುಕೊಳ್ಳೋಣ ಬನ್ನಿರಿ ಎಂದು ಜೊತೆಗೂಡಿ ಕರೆದುಕೊಂಡು ಹೊನ್ನು ಹೂತಿಟ್ಟ ಸ್ಥಳಕ್ಕೆ ಹೋದನು. ಹೂತುಹಾಕಿದ ಸ್ಥಳದಲ್ಲಿ ಹೊನ್ನನ್ನು ಕಾಣದೆ, ಇನ್ನು ಮಾತನಾಡದೆ ಇದ್ದರೆ ಅಪವಾದವು ತನ್ನ ಮೇಲೆ ಬರುವುದೆಂದು, **"ಪೊನ್ನನೆಲ್ಲಮಂ ನೀನೆ ಕೊಂಡೆ** (ಹೊನ್ನನೆಲ್ಲವನ್ನು ನೀನೆ ತೆಗೆದುಕೊಂಡು ಹೋಗಿದ್ದೀಯಾ) ಎಂದು **ದುಷ್ಟಬುದ್ಧಿಯು ಧರ್ಮಬುದ್ಧಿಯ ಮೇಲೆ ಹೊನ್ನು ಕದ್ದ ಆರೋಪವನ್ನು ಹೊರಿಸಿದನು.** ದುಷ್ಟಬುದ್ಧಿಯು ಅತಿ ಮೋಸದ ಮನಸ್ಸಿನಿಂದ, ಹಣದ ದುರಾಸೆಯಿಂದ ಬುದ್ಧಿಕೆಡಿಸಿಕೊಂಡು **'ಕಳ್ಳನಾದವನಿಗೆ ಸುಳ್ಳೇ ಬಲ'** ಎನ್ನುವ ಮಾತನ್ನು ನೆನೆಯುತ್ತ ಸುಳ್ಳನ್ನು ಹೇಳಿದನು.

ಅಲ್ಲದೆ ದುಷ್ಟಬುದ್ಧಿಯು ಮೊದಲೇ ಹಾ! ಹಾ! ಕೆಟ್ಟೆನೆಂದು ಬಾಯನ್ನು ಹೊಟ್ಟೆಯನ್ನು ಬಡಿದುಕೊಂಡು, ಕೂಗಾಡಿ ಧರ್ಮಬುದ್ಧಿಯ ಮೇಲೆ ಕಳ್ಳತನದ ಆಪಾದನೆಯನ್ನು ಮಾಡಿದನು. ಅಳುವಂತೆ ನಟಿಸುತ್ತಾ ರಕ್ಷಣೆಯಿಲ್ಲದಂತಾದುದು ಎಂದು ಕಾತರಿಸಿ ನುಡಿಯಲು, ಸ್ನೇಹ ಕೆಡುವಂತೆ ಮಾತನಾಡಿ, ನೀನು ಜಯಗಳಿಸಲಾರೆ ಎಂದು ಬಾಯನ್ನು ಬಡಿದುಕೊಂಡು ದುಷ್ಟಬುದ್ಧಿಯು ಹೋಗಲು ಸಿದ್ಧನಾದಾಗ, ವಿಚಾರಿಸೋಣ ಎಂದು ಧರ್ಮಾಧಿಕರಣರಲ್ಲಿಗೆ ಬಂದರು. ಆ ಇಬ್ಬರೂ ನಡೆದ ಎಲ್ಲ ಸಂಗತಿಯನ್ನು (ವಿಷಯ) ಸವಿಸ್ತಾರವಾಗಿ ಹೇಳಿ ಕೊನೆಯಲ್ಲಿ ದುಷ್ಟಬುದ್ಧಿಯು ಹೊನ್ನನೆಲ್ಲವನ್ನು ಈತನೇ ಕದ್ದುಕೊಂಡಿರುವುದಕ್ಕೆ ಸಾಕ್ಷಿ ಉಂಟು ಎಂದು ಹೇಳಿದನು.

ಆಗ ಸಭೆಯ ಸದಸ್ಯರು ಸಾಕ್ಷಿಯನ್ನು ಹೇಳು ಎನ್ನಲು ದುಷ್ಟಬುದ್ಧಿಯು ಆ ಸ್ಥಳದಲ್ಲಿ ಹೊನ್ನನ್ನು ಇಡುವಾಗ ಈತನೂ ಮತ್ತು ನಾನು ಬಿಟ್ಟು ಬೇರೆ ಯಾರು ಮನುಷ್ಯರು ಇರಲಿಲ್ಲ. ಆ ಸ್ಥಳದಲ್ಲಿ ಇರುವ **ವಟವೃಕ್ಷವೇ (ಆಲದಮರ) ಸಾಕ್ಷಿ ಎಂದಾಗ ಧರ್ಮಾಧಿಕರಣರು ವಿಸ್ಮಯಗೊಂಡರು.** ಆಗ ಧರ್ಮಾಧಿಕರಣರು **"ಈತನ ಮಾತು ಅಶ್ರುತಪೂರ್ವಮ್"** (ಈತನ ಮಾತು ಈ ಮೊದಲು ಕೇಳಿಲ್ಲದ್ದು) ಈ ಆಶ್ಚರ್ಯವನ್ನು ನೋಡೋಣವೆಂದು ಧರ್ಮಬುದ್ಧಿಯನ್ನು ಕರೆದು ನೀನು ಈ ಸಾಕ್ಷಿಯನ್ನು ಒಪ್ಪಿಕೊಳ್ಳುವೆಯಾ? ಎಂದರು. ಆಗ ಧರ್ಮಬುದ್ಧಿಯು , ಮರವನ್ನು

ಸಾಕ್ಷಿ ಎಂದು ಈ ಮುಂಚೆ ಹೇಳಿದವರು, ಕೇಳಿದವರು ಯಾರು ಇಲ್ಲ ಹೇಗೆ ಒಪ್ಪಿಕೊಳ್ಳಲಿ ಎಂದನು. ಆಗ ಧರ್ಮಾಧಿಕರಣರು ಮನುಷ್ಯರ ಒಳ್ಳೆಯ ಮತ್ತು ಕೆಟ್ಟ ಕಾರ್ಯಗಳನ್ನು ದೇವರುಗಳು ಅರಿಯುತ್ತಾರೆ. ಆದ್ದರಿಂದ ಈ ಸಾಕ್ಷಿ ಸರಿಯಾದದ್ದು. ಮರವನ್ನು ಮಾತನಾಡಿಸುವುದು ಬಹು ದೂರದ ಮಾತು. ಈ ಸಾಕ್ಷಿಯನ್ನು ಒಪ್ಪಿಕೊಳ್ಳುವುದು ಎಂದಾಗ ಧರ್ಮಬುದ್ಧಿಯು ಬಹಳ ಒಳ್ಳೆಯದು ಒಪ್ಪಿಕೊಂಡೆನು ಎಂದನು. ಆಗ ಧರ್ಮಾಧಿಕರಣರು ಇಂದು ಸಮಯವಾಗಿದೆ, ನಾಳೆ ಕೇಳೋಣ ಎಂದಾಗ ಎಲ್ಲರೂ ತಮ್ಮತಮ್ಮ ಮನೆಗೆ ಹೋದರು.

ಅಷ್ಟರಲ್ಲಿ ದುಷ್ಟಬುದ್ಧಿಯು ತನ್ನ ಮನೆಗೆ ಬಂದು, ತನ್ನ ತಂದೆಯ ಕೈಯನ್ನು ಹಿಡಿದು, ಏಕಾಂತದಲ್ಲಿ (ಯಾರು ಇಲ್ಲದ ಸ್ಥಳಕ್ಕೆ) ಕರೆದುಕೊಂಡು ಹೋಗಿ ನಡೆದ ಸಂಗತಿಯನ್ನೆಲ್ಲ ತಿಳಿಯುವಂತೆ ಹೇಳಿ **"ನಿಮ್ಮ ಒಂದು ಮಾತಿನಿಂದ ನಮ್ಮ ಪರಿಜನರೆಲ್ಲರೂ (ಮನೆಯವರೆಲ್ಲರೂ) ಹಲವು ಕಾಲ ಹಸಿಯದೆ ಊಟಮಾಡಿ ಬಾಳುವಷ್ಟು ಹಣವು ಲಭಿಸುವುದು. ನೀವು ಆ ಮರದ ಪೊಟರೆಯಲ್ಲಿ ಅವಿತುಕೊಂಡು ಧರ್ಮಬುದ್ಧಿಯೇ ಹೊನ್ನನ್ನು ತೆಗೆದುಕೊಂಡು ಹೋದನು ಎಂದು ಹೇಳಿರಿ"** ಎಂದು ಹೇಳಿದನು.

ಆಗ ದುಷ್ಟಬುದ್ಧಿಯ ತಂದೆ "ಪರರಧನವನ್ನು ಅಪಹರಿಸುವುದು ನಂಬಿಕೆದ್ರೋಹಮಾಡುವುದು, ಸ್ವಾಮಿದ್ರೋಹ ಮಾಡುವುದು ಇವೆಲ್ಲವೂ ಏನೇ ಮಾಡಿದರೂ ನಮ್ಮನ್ನು ಕೆಡಿಸುತ್ತವೆ. ಇಂತಹದೆಲ್ಲವನ್ನು ನೀನು ತಿಳಿದಿದ್ದು ನನ್ನನ್ನು ಸಾಕ್ಷಿ ಮಾಡಿ ಮಾತನಾಡಿಸಿ, ನನ್ನನ್ನು ಕೆಡಿಸಲು ಬಯಸಿದೆ. **"ನಿನ್ನ ಪಟುವಗೆ ನಮ್ಮ ಕುಲಮನೆಲ್ಲಮನಟಿವ ಬಗೆ"** (ನಿನ್ನ ಕೆಟ್ಟಬುದ್ಧಿಯು ನಮ್ಮ ಕುಲವನ್ನೆಲ್ಲವನ್ನು (ಮನೆತನವನ್ನೆಲ್ಲ) ಹಾಳು ಮಾಡುವ ರೀತಿಯದಾಗಿದೆ)" ಎಂದು ಹೇಳಿದಾಗ ದುಷ್ಟಬುದ್ಧಿಯು ಇದನ್ನು ಕೇಳಿ, ನನ್ನ ಕಾರ್ಯವನ್ನು ಕೆಡಿಸದೆ ನಾನು ಹೇಳಿದುದನ್ನು ಮಾಡೆಂದು ತನ್ನ ತಂದೆಯನ್ನು ಒಪ್ಪಿಸುತ್ತಿರುವಾಗ ಸೂರ್ಯನು ಪಶ್ಚಿಮ ದಿಕ್ಕನ್ನು ಸೇರಿದನು (ಮುಳುಗಿದನು).

ಭೂಮಿಯನ್ನು ಕ್ರಮಕ್ರಮವಾಗಿ ಆವರಿಸಿದ ವಿಸ್ತಾರವಾದ ಆಕಾಶದಲ್ಲಿ ದಿಗಂತವನ್ನು ಮುಚ್ಚಲ್ಪಟ್ಟ ದಿಕ್ಕುಗಳು, ಎಲ್ಲವನ್ನು ಮರೆಮಾಡಿದ ಕಣ್ಣಿನ ನೋಟವು, ಕಪ್ಪಾದ ದುಂಬಿಯಂತೆ ಮೋಡಗಳ ಸೇರಿ, ದಟ್ಟವಾದ ಕಾಡಿಗೆಯಷ್ಟು ಕಪ್ಪಾದ ಕೋಗಿಲೆಯಂತೆ, ವಿಷ್ಣುವಿನ ದೇಹದಂತೆ ಕಪ್ಪಾದ, ನೀಲಕಂಠನ ಕುತ್ತಿಗೆಯ ಬಣ್ಣದಂತೆ ಕಪ್ಪಾದ ಹೋಲಿಸಲು ಅಸಾಧ್ಯವಾದಷ್ಟು ಕತ್ತಲು ಹಬ್ಬಿತು.


ಅಂತು ಈ ರೀತಿ ಕವಿದ ಕತ್ತಲೆಯಲ್ಲಿ ದುಷ್ಟಬುದ್ಧಿ ತನ್ನ ತಂದೆಯನ್ನು ಕೊಲ್ಲದೆ ಬಿಡೆನು ಎಂಬಂತೆ ಕರೆದುಕೊಂಡು ಹೋಗಿ, ಮಾರಿಯ ಮನೆಗೆ ಹರಕೆಯ ಕುರಿಯನ್ನು ಒಳಹೊಗಿಸುವಂತೆ ಆಲದ ಮರದ ಪೊಟರೆಯ ಒಳಭಾಗಕ್ಕೆ ಹೊಗಿಸಿ, ಜಗಳವನ್ನು ಗೆದ್ದೆನೆಂದು ಸಂತಸಪಟ್ಟು ಮನೆಗೆ ಬಂದು ನಿದ್ರೆಯಲ್ಲಿ ಆಸಕ್ತನಾದನು.


ಸೂರ್ಯೋದಯವಾದೊಡನೆ **ಧರ್ಮಬುದ್ಧಿಯು ದೇವರು, ಗುರುಗಳು, ವೇದಾಧ್ಯಯನ ನಿರತರಾದವರನ್ನು ಪೂಜೆ ಮಾಡುತ್ತ ಬೆಳಗಿನ ಹೊತ್ತನ್ನು ಕಳೆದನು**. ಇದರಿಂದ ತಡವಾಗಲು, ಇತ್ತ ದುಷ್ಟಬುದ್ಧಿಯು ಮುಖವನ್ನು ತೊಳೆಯದೆ ಬಂದು ಧರ್ಮಾಧಿಕರಣರಿಗೆ ಹೀಗೆ ಹೇಳಿದನು.



ಪ್ರತಿವಾದಿಯು ಇನ್ನು ಬಂದಿಲ್ಲ ಬಹಳ ಹೊತ್ತಾಯಿತು, ನನ್ನ ಕಾರ್ಯವು ಯಾವುದೆಂದು ಹೇಳುತ್ತಿರುವಷ್ಟರಲ್ಲಿ ಧರ್ಮಬುದ್ಧಿಯು ಬರುತ್ತಿರುವುದನ್ನು ಕಂಡರು. ನಡೆಯಿರಿ ಎಂದು ಆ ಕ್ಷಣದಲ್ಲಿ **ಧರ್ಮಾಧಿಕರಣರು ಧರ್ಮಬುದ್ಧಿ ಮತ್ತು ದುಷ್ಟಬುದ್ಧಿಯ ಜಗಳವನ್ನು ಬಗೆಹರಿಸಲು, ವೃಕ್ಷಸಾಕ್ಷಿಯನ್ನು ಕೇಳಲು ವಟವೃಕ್ಷದ ಸಮೀಪಕ್ಕೆ ಬಂದರು.** ನಂತರ ಆ ವಟವೃಕ್ಷಕ್ಕೆ ಅಷ್ಟವಿಧವಾದ ಅರ್ಚನೆಯಿಂದ ಪೂಜಿಸಿ, ಆನಂತರ ಆ ಇಬ್ಬರನ್ನು ಮಾತನಾಡಿಸಿ, ಬಳಿಕ ಆ ಮರವನ್ನು ಕುರಿತು ಧರ್ಮಾಧಿಕರಣರು "ನೀನಾದರೋ ಯಕ್ಷಾದಿ ದಿವ್ಯ ದೇವತೆಗಳಿಗೆ ವಾಸಸ್ಥಾನವು ಮತ್ತು ಅವರ ಸೇವೆಯನ್ನು ಮಾಡುವಂತಹ ವೃಕ್ಷವೂ ಆಗಿದ್ದೀಯಾ, ಆ ಕಾರಣದಿಂದ ನಿನ್ನನ್ನು ಸಾಕ್ಷಿ ಮಾಡಿ ಕೇಳುವೆವು, ನೀನು ತಪ್ಪದೆ ಸಾಕ್ಷಿಯನ್ನು ನುಡಿ" ಎಂದು ಹೇಳುತ್ತಾ ಧರ್ಮಶ್ರವಣ (ಕಿವಿಗೊಟ್ಟು ಕೇಳಲು) ಮಾಡಲು, ಮರವು ಮಾತನಾಡಲಿಲ್ಲ.

ಮರದ ಪೊಟರೆಯೊಳಗೆ ಅಡಗಿದ್ದ ದುಷ್ಟಬುದ್ಧಿಯ ತಂದೆ ಪ್ರೇಮಮತಿಯು ಬುದ್ಧಿಗೆಟ್ಟು, ಧರ್ಮಮಾರ್ಗವನ್ನು ಬಿಟ್ಟು **"ಪ್ರಕೃತಿ ವಿಕೃತಿಯಾದ ಮನುಷ್ಯನಾಯುಷ್ಯಂ ಕುಂದುಗುಂ"** (ಪ್ರಕೃತಿ ವಿಕೃತಿಯಾದ (ಸಹಜ ಗುಣ ಬದಲಾವಣೆಯಾದ) ಮನುಷ್ಯನ ಆಯುಷ್ಯವು ಕಡಿಮೆಯಾಗುತ್ತದೆ) ಎಂದು ಹೇಳುವಂತೆ ಧರ್ಮಬುದ್ಧಿಯೇ ಧನವನ್ನು (ಹೊನ್ನನ್ನು) ತೆಗೆದುಕೊಂಡನು ಎಂದು ಹೇಳುವುದನ್ನು ಕೇಳಿ ಅಲ್ಲಿ ಸೇರಿದ್ದ ಜನರು ಹಾಗೂ ಧರ್ಮಾಧಿಕರಣರು ಆಶ್ಚರ್ಯಗೊಂಡಾಗ, ಧರ್ಮಬುದ್ಧಿಯು ಆಶ್ಚರ್ಯಕರವಾದುದು, ಇದು ದೇವರಲ್ಲ, ಅದು ದೇವರಾಗಿದ್ದರೆ ಸತ್ಯವನ್ನು ಏಕೆ ಹೇಳದು. ಇದರಲ್ಲಿ ಏನಾದರೊಂದು ಮೋಸವಾಗಿರಲೇಬೇಕು ಆ ಮರವನ್ನು ಸುತ್ತು ಹಾಕಿ ನೋಡಿ ದೊಡ್ಡದಾದ ಪೊಟರೆಯಲ್ಲಿ ಮನುಷ್ಯ ಸಂಚಾರವಾಗಿರುವುದನ್ನು ಕಂಡು ತೀರ್ಮಾನಿಸಿ ಧರ್ಮಬುದ್ಧಿಯು ಧರ್ಮಾಧಿಕಾರಿಗಳಿಗೆ ಹೀಗೆ ಹೇಳಿದನು. **"ಹುಸಿಯದ ಬೇಹಾರಿಯೇ ಇಲ್ಲ."** (ಸುಳ್ಳು ಹೇಳದ ವ್ಯಾಪಾರಿಯೇ ಇಲ್ಲ) ನಾನು ವ್ಯಾಪಾರಿ ಆಗಿರುವುದರಿಂದ ನಮ್ಮ ವೃತ್ತಿಧರ್ಮಕ್ಕೆ ಧರ್ಮಬುದ್ಧಿಯು ಅಧರ್ಮಬುದ್ಧಿಯಾಗಿ ಧನವನ್ನು ವಂಚನೆಯಿಂದ ನನ್ನ ಮನೆಗೆ ತೆಗೆದುಕೊಂಡು ಹೋಗುವೆ ಎನ್ನುವಷ್ಟರಲ್ಲಿ ಸೂರ್ಯೋದಯವಾದಾಗ ತೆಗೆದುಕೊಂಡು ಹೋಗಲು ಅವಕಾಶವಿಲ್ಲದೆ ಮರದ ಪೊಟರೆಯೊಳಗೆ ಇಟ್ಟು ಬಂದು ಮರುದಿವಸ ಹೋಗಿ ನೋಡುವಷ್ಟರಲ್ಲಿ ಆ ಹೊನ್ನನ್ನು ಒಂದು ಹಾವು ಸುತ್ತಿಕೊಂಡಿದ್ದಾಗ ಅದನ್ನು ತೆಗೆದುಕೊಳ್ಳಲು ಹೆದರಿ ಹೋದೆನು. ನೀವು ಇಲ್ಲಿದ್ದಂತೆ ನೋಡುತ್ತ ಇರಿ, ಪೊಟರೆಯೊಳಗೆ ಹೊಗೆಯನ್ನು ಹಾಕಿ, ಹಾವನ್ನು ಹೊರಬರಿಸಿ, ಕದ್ದುಕೊಂಡ ಒಡವೆಯನ್ನು ಕೊಡುವೆನು ಎಂದನು.





ಧರ್ಮಬುದ್ಧಿಯು ಹುಲ್ಲನ್ನು, ಪುಳ್ಳಿಗಳನ್ನು ತರಿಸಿ, ಆ ಪೊಟರೆಯೊಳಗೆ ಅಡಗಿಸಿ ತುಂಬಿ, ದುಷ್ಟಬುದ್ಧಿಯ ಮನೆಗೆ ಬೆಂಕಿಯನ್ನು ಇಡುವಂತೆ ಬೆಂಕಿಯನ್ನು ಇಟ್ಟೊಡನೆ ಹೊಗೆ ಸುತ್ತಿ ಬೆಂಕಿ ಉರಿಯುತ್ತಿರಲು, ಪ್ರೇಮಮತಿ ಧೃತಿಗೆಟ್ಟು (ಧೈರ್ಯ ಕಳೆದುಕೊಂಡು) ಗೋಳಾಡಿ ಪೊಟರೆಯೊಳಗಿಂದ ಸುರುಳುತ್ತ ಉರುಳಿ ಉಸಿರುಗಟ್ಟಿ ಪ್ರಾಣತ್ಯಾಗ ಮಾಡಿದನು. ಇದನ್ನು ಧರ್ಮಾಧಿಕರಣರು ನೋಡಿ ಇವನು ದುಷ್ಟಬುದ್ಧಿಯ ತಂದೆ ಸಂದೇಹವಿಲ್ಲ ಎಂದು ತಿಳಿದು, ಈ ಪಾಪಕರ್ಮನಾದ ದುಷ್ಟಮಗನಿಂದ ನಿನಗೆ ಇಂತಹ ದುರ್ಮರಣ ಬಂದೊದಗಿತು ಎಂದು ನುಡಿದರು.

## ಅಭ್ಯಾಸ ಪ್ರಶ್ನೋತ್ತರಗಳು

**ಅ) ಕೊಟ್ಟಿರುವ ಪ್ರಶ್ನೆಗಳಿಗೆ ಒಂದೊಂದು ವಾಕ್ಯಗಳಲ್ಲಿ ಉತ್ತರಿಸಿ.**

**1. 'ವೃಕ್ಷ ಸಾಕ್ಷಿ' ಕತೆಯನ್ನು ಯಾವ ಕೃತಿಯಿಂದ ಆರಿಸಲಾಗಿದೆ?**

**ಉತ್ತರ:** 'ವೃಕ್ಷ ಸಾಕ್ಷಿ' ಕತೆಯನ್ನು ದುರ್ಗಸಿಂಹನ ಪಂಚತಂತ್ರ ಕೃತಿಯಿಂದ ಆರಿಸಲಾಗಿದೆ.

**2. ದುಷ್ಟಬುದ್ಧಿಯು ಧರ್ಮಬುದ್ಧಿಯ ಮೇಲೆ ಯಾವ ಆರೋಪವನ್ನು ಹೊರಿಸಿದನು?**

**ಉತ್ತರ:** ದುಷ್ಟಬುದ್ಧಿಯು ಧರ್ಮಬುದ್ಧಿಯ ಮೇಲೆ ಹೊನ್ನು ಕದ್ದ ಆರೋಪವನ್ನು ಹೊರಿಸಿದನು.

**3. ಧರ್ಮಾಧಿಕರಣರು ಏಕೆ ವಿಸ್ಮಯ ಹೊಂದಿದರು?**

**ಉತ್ತರ:** ದುಷ್ಟಬುದ್ಧಿ ವಟವೃಕ್ಷವೇ (ಆಲದಮರ) ಸಾಕ್ಷಿ ಎಂದಾಗ ಧರ್ಮಾಧಿಕರಣರು ವಿಸ್ಮಯಗೊಂಡರು.

**4. ಧರ್ಮಬುದ್ಧಿಯು ತನ್ನ ಬೆಳಗಿನ ಹೊತ್ತನ್ನು ಹೇಗೆ ಕಳೆದನು?**

**ಉತ್ತರ:** ಧರ್ಮಬುದ್ಧಿಯು ದೇವರು, ಗುರುಗಳು, ವೇದಾಧ್ಯಯನ ನಿರತರಾದವರನ್ನು ಪೂಜೆ ಮಾಡುತ್ತ ಬೆಳಗಿನ ಹೊತ್ತನ್ನು ಕಳೆದನು.

**5. ಧರ್ಮಾಧಿಕರಣರು ವಟವೃಕ್ಷದ ಸಮೀಪಕ್ಕೆ ಏಕೆ ಬಂದರು?**

**ಉತ್ತರ:** ಧರ್ಮಾಧಿಕರಣರು ಧರ್ಮಬುದ್ಧಿ ಮತ್ತು ದುಷ್ಟಬುದ್ಧಿಯ ಜಗಳವನ್ನು ಬಗೆಹರಿಸಲು, ವೃಕ್ಷಸಾಕ್ಷಿಯನ್ನು ಕೇಳಲು ವಟವೃಕ್ಷದ ಸಮೀಪಕ್ಕೆ ಬಂದರು.

## ಹೆಚ್ಚುವರಿ ಪ್ರಶ್ನೋತ್ತರಗಳು

**6. ದುಷ್ಟಬುದ್ಧಿಯ ತಂದೆಯ ಹೆಸರೇನು?**

**ಉತ್ತರ:** ದುಷ್ಟಬುದ್ಧಿಯ ತಂದೆಯ ಹೆಸರು ಪ್ರೇಮಮತಿ.

**7. ಧರ್ಮಬುದ್ಧಿ ಮತ್ತು ದುಷ್ಟಬುದ್ಧಿಯರು ಎಲ್ಲಿ ಬೀಡುಬಿಟ್ಟಿದ್ದರು?**

**ಉತ್ತರ:** ಧರ್ಮಬುದ್ಧಿ ಮತ್ತು ದುಷ್ಟಬುದ್ಧಿಯರು ಮಧುರಾಪುರನಗರ ಹೊರವಲಯದ ಉದ್ಯಾನವನದೊಳಗೆ ಬೀಡುಬಿಟ್ಟರು.

**8. ಹೊನ್ನನ್ನು ಕದ್ದವರು ಯಾರು?**

**ಉತ್ತರ:** ಹೊನ್ನನ್ನು ಕದ್ದವರು ದುಷ್ಟಬುದ್ಧಿ.

**ಆ) ಕೊಟ್ಟಿರುವ ಪ್ರಶ್ನೆಗಳಿಗೆ ಮೂರು–ನಾಲ್ಕು ವಾಕ್ಯಗಳಲ್ಲಿ ಉತ್ತರಿಸಿ.**

**1. ಧರ್ಮಬುದ್ಧಿಗೆ ದುಷ್ಟಬುದ್ಧಿಯು ಯಾವ ಸಲಹೆಯಿತ್ತನು?**

**ಉತ್ತರ:** ಧರ್ಮಬುದ್ಧಿಗೆ ದುಷ್ಟಬುದ್ಧಿಯು "ಈ ಹೊನ್ನನ್ನು ಹಂಚಿಕೊಂಡು ಮನೆಯಲ್ಲ ಸ್ವೇಚ್ಛೆಯಿಂದ ಇರುವವರಲ್ಲ. ಮತ್ತೆ ವ್ಯಾಪಾರಕ್ಕಾಗಿ ದೂರದೇಶಕ್ಕೆ ಹೋಗಬೇಕಾಗುತ್ತದೆ. ಆಕಾರಣದಿಂದ ನಿನಗೂ ನನಗೂ ವ್ಯಯಕ್ಕೆ (ಖರ್ಚಿಗೆ) ತಕ್ಕಷ್ಟು ಹೊನ್ನನ್ನು ತೆಗೆದುಕೊಂಡು, ಉಳಿದ ಹೊನ್ನನೆಲ್ಲವನ್ನು ಇಲ್ಲಿಯೇ ಇಡೋಣ" ಎಂದು ಸಲಹೆಯಿತ್ತನು.

**2. ದುಷ್ಟಬುದ್ಧಿಯು ತನ್ನ ತಂದೆಗೆ ಏಕಾಂತದಲ್ಲಿ ಏನೆಂದು ಹೇಳಿದನು?**

**ಉತ್ತರ:** ದುಷ್ಟಬುದ್ಧಿಯು ತನ್ನ ತಂದೆಗೆ ಏಕಾಂತದಲ್ಲಿ ಕರೆದುಕೊಂಡು ಹೋಗಿ "ನಿಮ್ಮ ಒಂದು ಮಾತಿನಿಂದ ನಮ್ಮ ಪರಿಜನರೆಲ್ಲರೂ (ಮನೆಯವರೆಲ್ಲರೂ) ಹಲವು ಕಾಲ ಹಸಿಯದೆ ಊಟಮಾಡಿ ಬಾಳುವಷ್ಟು ಹಣವು ಲಭಿಸುವುದು. ನೀವು ಆ ಮರದ ಪೊಟರೆಯಲ್ಲಿ ಅವಿತುಕೊಂಡು ಧರ್ಮಬುದ್ಧಿಯೇ ಹೊನ್ನನ್ನು ತೆಗೆದುಕೊಂಡು ಹೋದನು ಎಂದು ಹೇಳಿ" ಎಂದು ಹೇಳಿದನು.

**3. ಧರ್ಮಾಧಿಕರಣರು ವಟವೃಕ್ಷಕ್ಕೆ ಏನು ಹೇಳಿದರು?**

**ಉತ್ತರ:** ಧರ್ಮಾಧಿಕರಣರು ವಟವೃಕ್ಷಕ್ಕೆ "ನೀನಾದರೋ ಯಕ್ಷಾದಿ ದಿವ್ಯ ದೇವತೆಗಳಿಗೆ ವಾಸಸ್ಥಾನವು ಮತ್ತು ಅವರ ಸೇವೆಯನ್ನು ಮಾಡುವಂತಹ ವೃಕ್ಷವೂ ಆಗಿದ್ದೀಯಾ, ಆ ಕಾರಣದಿಂದ ನಿನ್ನನ್ನು ಸಾಕ್ಷಿ ಮಾಡಿ ಕೇಳುವೆವು, ನೀನು ತಪ್ಪದೆ ಸಾಕ್ಷಿಯನ್ನು ನುಡಿ" ಎಂದು ಹೇಳಿದರು.

## ಹೆಚ್ಚುವರಿ ಪ್ರಶ್ನೋತ್ತರಗಳು

**4. ದುಷ್ಟಬುದ್ಧಿಯ ತಂದೆ ಪ್ರೇಮಮತಿ ತನ್ನ ಮಗ ದುಷ್ಟಬುದ್ಧಿಗೆ ಹೇಳಿದ ಹಿತನುಡಿಗಳಾವುವು ?**

**ಉತ್ತರ :** ದುಷ್ಟಬುದ್ಧಿಯ ತಂದೆ ಪ್ರೇಮಮತಿ "ಪರರಧನವನ್ನು ಅಪಹರಿಸುವುದು, ನಂಬಿಕೆದ್ರೋಹ ಮಾಡುವುದು, ಸ್ವಾಮಿದ್ರೋಹ ಮಾಡುವುದು ಇವೆಲ್ಲವೂ ಏನೇ ಮಾಡಿದರೂ ನಮ್ಮನ್ನು ಕೆಡಿಸುತ್ತವೆ. ಇಂತಹದೆಲ್ಲವನ್ನು ನೀನು ತಿಳಿದಿದ್ದು ನನ್ನನ್ನು ಸಾಕ್ಷಿ ಮಾಡಿ ಮಾತನಾಡಿಸಿ, ನನ್ನನ್ನು ಕೆಡಿಸಲು ಬಯಸಿದೆ. ನಿನ್ನ ಕೆಟ್ಟಬುದ್ಧಿಯು ನಮ್ಮ ಕುಲವನ್ನೆಲ್ಲವನ್ನು ಹಾಳು ಮಾಡುವ ರೀತಿಯದ್ದಾಗಿದೆ" ಎಂದು ದುಷ್ಟಬುದ್ಧಿಗೆ ಹೇಳಿದ ಹಿತನುಡಿಗಳಾಗಿವೆ.

**5. ದುಷ್ಟಬುದ್ಧಿಯು ಧರ್ಮಬುದ್ಧಿಯ ವಿರುದ್ಧ ಸಾಕ್ಷಿ ಹೇಳಿಸಲು ಮಾಡಿದ ಉಪಾಯವೇನು ?**

**ಉತ್ತರ :** ದುಷ್ಟಬುದ್ಧಿಯು ಧರ್ಮಬುದ್ಧಿಯ ವಿರುದ್ಧ ಸಾಕ್ಷಿ ಹೇಳಿಸಲು ತನ್ನ ಮನೆಗೆ ಬಂದು, ತನ್ನ ತಂದೆಯ ಕೈಯನ್ನು ಹಿಡಿದು, ಏಕಾಂತದಲ್ಲಿ ಕರೆದುಕೊಂಡು ಹೋಗಿ ನಡೆದ ಸಂಗತಿಯನ್ನೆಲ್ಲ ತಿಳಿಯುವಂತೆ ಹೇಳಿ "ನಿಮ್ಮ ಒಂದು ಮಾತಿನಿಂದ ನಮ್ಮ ಪರಿಜನರೆಲ್ಲರೂ ಹಲವು ಕಾಲ ಹಸಿಯದೆ ಊಟಮಾಡಿ ಬಾಳುವಷ್ಟು ಹಣವು ಲಭಿಸುವುದು. ನೀವು ಆ ಮರದ ಪೊಟರೆಯಲ್ಲಿ ಅವಿತುಕೊಂಡು ಧರ್ಮಬುದ್ಧಿಯೇ ಹೊನ್ನನ್ನು ತೆಗೆದುಕೊಂಡು ಹೋದನು ಎಂದು ಹೇಳಿರಿ" ಎಂದು ತನ್ನ ತಂದೆಗೆ ಹೇಳುವಂತೆ ಉಪಾಯ ಮಾಡಿದನು.

**6. ವೃಕ್ಷಸಾಕ್ಷಿಯ ಮಾತಿನಿಂದ ಅಚ್ಚರಿಗೊಂಡ ಧರ್ಮಬುದ್ಧಿ ಸತ್ಯ ತಿಳಿಯಲು ಮಾಡಿದ ಉಪಾಯವೇನು?**

**ಉತ್ತರ :** ವೃಕ್ಷಸಾಕ್ಷಿಯ ಮಾತಿನಿಂದ ಅಚ್ಚರಿಗೊಂಡ ಧರ್ಮಬುದ್ಧಿ ವೃಕ್ಷದ ಪೊಟರೆಯಲ್ಲಿ ಮನುಷ್ಯ ಸಂಚಾರವಾಗಿರುವುದನ್ನು ಕಂಡು ಹುಲ್ಲನ್ನು, ಪುಳ್ಳೆಗಳನ್ನು ತರಿಸಿ, ಆ ವೃಕ್ಷದ ಪೊಟರೆಯೊಳಗೆ ಅಡಗಿಸಿ ತುಂಬಿ, ದುಷ್ಟಬುದ್ಧಿಯ ಮನೆಗೆ ಬೆಂಕಿಯನ್ನು ಇಡುವಂತೆ ಬೆಂಕಿಯನ್ನು ಇಟ್ಟನು

ಆಗ ಹೊಗೆ ಸುತ್ತಿ ಬೆಂಕಿ ಉರಿಯುತ್ತಿರಲು, ಪ್ರೇಮಮತಿ ಧೃತಿಗೆಟ್ಟು ಗೋಳಾಡಿ ಪೊಟರೆಯೊಳಗಿಂದ ಸುರುಳುತ್ತ ಉರುಳಿ ಉಸಿರುಗಟ್ಟಿ ಪ್ರಾಣತ್ಯಾಗ ಮಾಡಿದನು. ಇದನ್ನು ನೋಡಿದ ಧರ್ಮಾಧಿಕರಣರಿಗೆ ಸತ್ಯವೇನೆಂದು ತಿಳಿಯಿತು.

**7. ದುಷ್ಟಬುದ್ಧಿಯು ಧರ್ಮಬುದ್ಧಿಯ ಮೇಲೆ ಹೊನ್ನು ಕದ್ದ ಆರೋಪವನ್ನು ಹೇಗೆ ಹೊರಿಸಿದನು ?**

**ಉತ್ತರ** : ಒಂದು ದಿನ ದುಷ್ಟಬುದ್ಧಿಯು ಧರ್ಮಬುದ್ಧಿಯನ್ನು ಮೋಸಗೊಳಿಸಿ ಹೊನ್ನು ಹೂತಿಟ್ಟ ಜಾಗಕ್ಕೆ ಹೋಗಿ ಹೊನ್ನನೆಲ್ಲವನ್ನು ತೆಗೆದುಕೊಂಡು ಕುಳಿಯನ್ನು ಮೊದಲಿನಂತೆ ಮುಚ್ಚಿ, ಕೆಲವಾನು ದಿವಸಗಳನ್ನು ಬಿಟ್ಟು, ತಾನೇ ಧರ್ಮಬುದ್ಧಿಯಲ್ಲಿಗೆ ಬಂದು, ವ್ಯಯಕ್ಕೆ ಹೊನ್ನಿಲ್ಲ. ಇನ್ನು ಸ್ವಲ್ಪ ಹೊನ್ನನ್ನು ತೆಗೆದುಕೊಳ್ಳೋಣ ಬನ್ನಿರಿ ಎಂದು ಜೊತೆಗೂಡಿ ಕರೆದುಕೊಂಡು ಹೊನ್ನು ಹೂತಿಟ್ಟ ಸ್ಥಳಕ್ಕೆ ಹೋದನು. ಹೂತುಹಾಕಿದ ಸ್ಥಳದಲ್ಲಿ ಹೊನ್ನನ್ನು ಕಾಣದೆ, ಇನ್ನು ಮಾತನಾಡದೆ ಇದ್ದರೆ ಅಪವಾದವು ತನ್ನ ಮೇಲೆ ಬರುವುದೆಂದು, ಹೊನ್ನನೆಲ್ಲವನ್ನು ನೀನೆ ತೆಗೆದುಕೊಂಡು ಹೋಗಿದ್ದೀಯಾ ಎಂದು ದುಷ್ಟಬುದ್ಧಿಯು ಧರ್ಮಬುದ್ಧಿಯ ಮೇಲೆ ಹೊನ್ನು ಕದ್ದ ಆರೋಪವನ್ನು ಹೊರಿಸಿದನು.

**ಇ) ಕೊಟ್ಟಿರುವ ಪ್ರಶ್ನೆಗಳಿಗೆ ಎಂಟು-ಹತ್ತು ವಾಕ್ಯಗಳಲ್ಲಿ ಉತ್ತರಿಸಿ.**

**1. ವೃಕ್ಷ ಸಾಕ್ಷಿ ಪಾಠದಲ್ಲಿ ನೀವು ಮೆಚ್ಚುವ ಪಾತ್ರ ಯಾವುದು? ಏಕೆ?**

**ಉತ್ತರ:** ವೃಕ್ಷಸಾಕ್ಷಿ ಪಾಠದಲ್ಲಿ ನಾನು ಮೆಚ್ಚುವ ಪಾತ್ರವೆಂದರೆ ಧರ್ಮಬುದ್ಧಿಯ ಪಾತ್ರ. ಏಕೆಂದರೆ ಧರ್ಮಬುದ್ಧಿ ಧರ್ಮಮಾರ್ಗದಲ್ಲಿ ನಡೆಯುವ ವ್ಯಕ್ತಿ. ಹೆಸರಿಗೆ ತಕ್ಕಂತೆ ಗುಣವನ್ನು ಹೊಂದಿದ್ದು ಧರ್ಮಬುದ್ದಿಯ ಪಾತ್ರವು ಸಹನಶೀಲತೆ, ಸುಸಂಸ್ಕೃತ ವ್ಯಕ್ತಿತ್ವವನ್ನು ನಿರೂಪಿಸುತ್ತದೆ. ತನ್ನ ಸ್ನೇಹಿತನ ಮಾತನ್ನು ನಂಬುಗೆಯಿಂದ ನೋಡಿದವನಾಗಿದ್ದಾನೆ. ಆತನಲ್ಲಿ ತಾಳ್ಮೆ ಸ್ವಭಾವ ಉನ್ನತವಾದದ್ದು ಏಕೆಂದರೆ ದುಷ್ಟಬುದ್ಧಿ ಈತನ ಮೇಲೆ ಕಳ್ಳತನದ ಆರೋಪವರಿಸಿದರೂ ಭಯಪಡದೆ ಶಾಂತನಾಗಿ ವರ್ತಿಸಿದನು. ಸೂರ್ಯೋದಯವಾದೊಡನೆ ಧರ್ಮಬುದ್ಧಿಯು ದೇವರು, ಗುರುಗಳು, ವೇದಾಧ್ಯಯನ ನಿರತರಾದವರನ್ನು ಪೂಜೆ ಮಾಡುತ್ತ ಬೆಳಗಿನ ಹೊತ್ತನ್ನು ಕಳೆದನು ಎಂಬುದನ್ನು ನೋಡಿದರೆ ಆತನೊಬ್ಬ ದೈವಭಕ್ತನಾಗಿದ್ದನು ಎಂದು ಹೇಳಬಹುದು. ಅಲ್ಲದೇ ಮರದ ಪೊಟರೆಯೊಳಗಿದ್ದ ಪ್ರೇಮಮತಿ, ಧರ್ಮಬುದ್ಧಿಯೇ ಹೊನ್ನನ್ನು ಕದ್ದನು ಎಂದು ಹೇಳಿದಾಗಲೂ ವಿಚಲಿತನಾಗದೆ, ದೇವರು ಮಾತನಾಡಿದ್ದರೆ ಸತ್ಯವನ್ನು ಹೇಳುತ್ತಿತ್ತು ಇದರಲ್ಲಿ ಏನೋ ಮೋಸ ಅಡಗಿದೆ ಎಂದು ತನ್ನ ಬುದ್ಧಿವಂತಿಕೆಯಿಂದ ಮರದೊಳಗೆ ಮನುಷ್ಯ ಸಂಚಾರವಾಗಿರುವದನ್ನು ಗ್ರಹಿಸಿಕೊಂಡು ಮರದ ಪೊಟರೆಯೊಳಗೆ ಅಡಗಿದ್ದ ದುಷ್ಟಬುದ್ಧಿಯ ತಂದೆ ಪ್ರೇಮಮತಿಯನ್ನು ಹೊರಗೆ ಬರುವಂತೆ ಮಾಡಿ ಸತ್ಯವನ್ನು ತೋರಿಸುತ್ತಾನೆ. ಆದ್ದರಿಂದ ಆತ ಸತ್ಯವಂತನಾಗಿದ್ದನು. ದುಷ್ಟಬುದ್ಧಿಯ ತಂತ್ರ ಆತನಿಗೆ ತಿರುಗು ಬಾಣವಾಗುವಂತೆ ಮಾಡಿ ಪಾಪಬುದ್ಧಿಯವನಾದ ದುಷ್ಟಬುದ್ಧಿಗೆ ಸರಿಯಾದ ಪಾಠವನ್ನು ಕಲಿಸಿದನು. ಆದ್ದರಿಂದ ನನಗೆ ಧರ್ಮಬುದ್ಧಿಯ ಪಾತ್ರ ಮೆಚ್ಚಿಕೆಯಾಯಿತು.

**2. ದುಷ್ಟಬುದ್ಧಿಯ ತಂತ್ರ ಅವನಿಗೆ ತಿರುಗುಬಾಣವಾದ ಬಗೆಯನ್ನು ತಿಳಿಸಿ.**

**ಉತ್ತರ:** ದುಷ್ಟಬುದ್ಧಿಯು ಅತಿ ಮೋಸದ ಮನಸ್ಸಿನಿಂದ, ಧರ್ಮಬುದ್ಧಿಯನ್ನು ಮೋಸಗೊಳಿಸಿ ಹೋಗಿ ಹೂತಿಟ್ಟ ಹೊನ್ನನೆಲ್ಲವನ್ನು ತೆಗೆದುಕೊಂಡು ಬಂದು, ಧರ್ಮಬುದ್ಧಿಯ ಮೇಲೆ ಹೊನ್ನು ಕದ್ದ ಆರೋಪವನ್ನು ಹೊರಿಸಿದನು. ಈ ವಿಚಾರ ಧರ್ಮಾಧಿಕರಣರ ಬಳಿ ಬಂದಾಗ ಧರ್ಮಬುದ್ಧಿಯೇ ಹೊನ್ನು ಕದ್ದಿರುವುದಕ್ಕೆ ಅಲ್ಲಿದ್ದ ಆಲದ ಮರವೇ ಸಾಕ್ಷಿ ಎಂದು ಹೇಳುತ್ತಾನೆ. ಸಾಕ್ಷಿ ಹೇಳಿಸಲು ತನ್ನ ತಂದೆಯನ್ನೇ ಆ ಮರದ ಪೊಟರೆಯೊಳಗಡೆ ಕೂಡಿಸಿ ಧರ್ಮಬುದ್ಧಿಯೇ ಹೊನ್ನನ್ನು ಕದ್ದನು ಎಂದು ಹೇಳಿಸುತ್ತಾನೆ. ಇದರಲ್ಲಿ ಏನಾದರೊಂದು ಮೋಸವಾಗಿರಲೇಬೇಕು ಎಂದು ಅರಿತ ಧರ್ಮಬುದ್ಧಿ ಆ ಮರವನ್ನು ಸುತ್ತು ಹಾಕಿ ನೋಡಿ ದೊಡ್ಡದಾದ ಪೊಟರೆಯಲ್ಲಿ ಮನುಷ್ಯ ಸಂಚಾರವಾಗಿರುವುದನ್ನು ಕಂಡು ತೀರ್ಮಾನಿಸಿ ಧರ್ಮಬುದ್ಧಿಯು ಧರ್ಮಾಧಿಕಾರಿಗಳಿಗೆ ಹೀಗೆ ಹೇಳಿದನು. **"ಹುಸಿಯದ ಬೇಹಾರಿಯೇ ಇಲ್ಲ."** ನಾನು ವ್ಯಾಪಾರಿ ಆಗಿರುವುದರಿಂದ ನಮ್ಮ ವೃತ್ತಿಧರ್ಮಕ್ಕೆ ಸುಳ್ಳನ್ನು ಹೇಳಿದ್ದೇನೆ. ಧನವನ್ನು ವಂಚನೆಯಿಂದ ನನ್ನ ಮನೆಗೆ ತೆಗೆದುಕೊಂಡು ಹೋಗುವೆ ಎನ್ನುವಷ್ಟರಲ್ಲಿ ಸೂರ್ಯೋದಯವಾದಾಗ ತೆಗೆದುಕೊಂಡು ಹೋಗಲು ಅವಕಾಶವಿಲ್ಲದೆ ಮರದ ಪೊಟರೆಯೊಳಗೆ ಇಟ್ಟು ಬಂದು, ಮರುದಿವಸ ಹೋಗಿ ನೋಡುವಷ್ಟರಲ್ಲಿ ಆ ಹೊನ್ನನ್ನು ಒಂದು ಹಾವು ಸುತ್ತಿಕೊಂಡಿದ್ದಾಗ ಅದನ್ನು ತೆಗೆದುಕೊಳ್ಳಲು ಹೆದರಿ ಹೋದೆನು. ನೀವು ಇಲ್ಲಿದ್ದಂತೆ ನೋಡುತ್ತ ಇರಿ, ಪೊಟರೆಯೊಳಗೆ ಹೊಗೆಯನ್ನು ಹಾಕಿ, ಹಾವನ್ನು ಹೊರಬರಿಸಿ, ಕದ್ದುಕೊಂಡ ಒಡವೆಯನ್ನು ಕೊಡುವೆನು ಎಂದನು. ಧರ್ಮಬುದ್ಧಿಯು ಹುಲ್ಲನ್ನು, ಪುಳ್ಳಿಗಳನ್ನು ತರಿಸಿ, ಆ ಪೊಟರೆಯೊಳಗೆ ಅಡಗಿಸಿ ತುಂಬಿ, ಬೆಂಕಿಯನ್ನು ಇಟ್ಟೊಡನೆ ಹೊಗೆ ಸುತ್ತಿ ಬೆಂಕಿ ಉರಿಯುತ್ತಿರಲು, ಪ್ರೇಮಮತಿ ಧೃತಿಗೆಟ್ಟು ಗೋಳಾಡಿ ಪೊಟರೆಯೊಳಗಿಂದ ಸುರುಳುತ್ತ ಉರುಳಿ ಉಸಿರುಗಟ್ಟಿ ಪ್ರಾಣತ್ಯಾಗ ಮಾಡಿದನು. ಇದನ್ನು ಧರ್ಮಾಧಿಕರಣರು ನೋಡಿ ಇವನು ದುಷ್ಟಬುದ್ಧಿಯ ತಂದೆ ಸಂದೇಹವಿಲ್ಲ ಎಂದು ತಿಳಿದು, ಈ ಪಾಪಕರ್ಮನಾದ ದುಷ್ಟಮಗನಿಂದ ನಿನಗೆ ಇಂತಹ ದುರ್ಮರಣ ಬಂದೊದಗಿತು ಎಂದು ನುಡಿದರು. ಹೀಗೆ ದುಷ್ಟಬುದ್ಧಿಯ ತಂತ್ರ ಅವನಿಗೆ ತಿರುಗುಬಾಣವಾಯಿತು.

**ಈ) ಸಂದರ್ಭಸಹಿತ ಸ್ವಾರಸ್ಯವನ್ನು ವಿವರಿಸಿ.**

**1. "ಪೊನ್ನನೆಲ್ಲಮಂ ನೀನೆ ಕೊಂಡೆ"**

**ಆಯ್ಕೆ:** ಈ ವಾಕ್ಯವನ್ನು **'ದುರ್ಗಸಿಂಹ ಕವಿ'** ವಿರಚಿತ **'ಪಂಚತಂತ್ರ'** ಎಂಬ ಕೃತಿಯಿಂದ ಆಯ್ದ **'ವೃಕ್ಷಸಾಕ್ಷಿ'** ಎಂಬ ಪಾಠದಿಂದ ಆರಿಸಲಾಗಿದೆ.

**ಸಂದರ್ಭ:** ಈ ಮಾತನ್ನು ದುಷ್ಟಬುದ್ಧಿಯು ಧರ್ಮಬುದ್ಧಿಗೆ ಹೇಳಿದನು. ದುಷ್ಟಬುದ್ಧಿಯು ಧರ್ಮಬುದ್ಧಿಯನ್ನು ಮೋಸಗೊಳಿಸಿ ಹೋಗಿ ಹೂತಿಟ್ಟ ಹೊನ್ನನೆಲ್ಲವನ್ನು ತೆಗೆದುಕೊಂಡು ಕುಳಿಯನ್ನು ಮೊದಲಿನಂತೆ ಮುಚ್ಚಿ, ಕೆಲವಾನು ದಿವಸಗಳನ್ನು ಬಿಟ್ಟು, ತಾನೇ ಧರ್ಮಬುದ್ಧಿಯಲ್ಲಿಗೆ ಬಂದು, ವ್ಯಯಕ್ಕೆ ಹೊನ್ನಿಲ್ಲ. ಇನ್ನು ಸ್ವಲ್ಪ ಹೊನ್ನನ್ನು ತೆಗೆದುಕೊಳ್ಳೋಣ ಬನ್ನಿರಿ ಎಂದು ಜೊತೆಗೂಡಿ ಕರೆದುಕೊಂಡು ಹೊನ್ನು ಹೂತಿಟ್ಟ ಸ್ಥಳಕ್ಕೆ ಹೋದನು. ಹೂತುಹಾಕಿದ ಸ್ಥಳದಲ್ಲಿ ಹೊನ್ನನ್ನು ಕಾಣದೆ, ಇನ್ನು ಮಾತನಾಡದೆ ಇದ್ದರೆ ಅಪವಾದವು ತನ್ನ ಮೇಲೆ ಬರುವುದೆಂದು, **"ಪೊನ್ನನೆಲ್ಲಮಂ ನೀನೆ ಕೊಂಡೆ** (ಹೊನ್ನನೆಲ್ಲವನ್ನು ನೀನೆ ತೆಗೆದುಕೊಂಡು ಹೋಗಿದ್ದೀಯಾ) ಎಂದು ದುಷ್ಟಬುದ್ಧಿಯು ಧರ್ಮಬುದ್ಧಿಯ ಮೇಲೆ ಹೊನ್ನು ಕದ್ದ ಆರೋಪವನ್ನು ಹೊರಿಸಿದ ಸಂದರ್ಭವಾಗಿದೆ.

**ಸ್ವಾರಸ್ಯ :** ತನ್ನ ಮೇಲೆ ಅಪವಾದ ಬರದಂತೆ ನೋಡಿಕೊಳ್ಳುವ ಮತ್ತು ಇನ್ನೊಬ್ಬರ ಮೇಲೆ ಅಪವಾದವನ್ನು ಹೊರಿಸುವ ದುಷ್ಟಬುದ್ಧಿಯು ತಂತ್ರವನ್ನು ಕವಿ ಈ ವಾಕ್ಯದಲ್ಲಿ ಸ್ವಾರಸ್ಯಪೂರ್ಣವಾಗಿ ಎತ್ತಿ ತೋರಿಸಿದ್ದಾನೆ.

**2. "ಈತನ ಮಾತು ಅಶ್ರುತಪೂರ್ವಮ್"**

**ಆಯ್ಕೆ :** ಈ ವಾಕ್ಯವನ್ನು **'ದುರ್ಗಸಿಂಹ ಕವಿ'** ವಿರಚಿತ **'ಪಂಚತಂತ್ರ'** ಎಂಬ ಕೃತಿಯಿಂದ ಆಯ್ದ **'ವೃಕ್ಷಸಾಕ್ಷಿ'** ಎಂಬ ಪಾಠದಿಂದ ಆರಿಸಲಾಗಿದೆ.

**ಸಂದರ್ಭ:** ಈ ವಾಕ್ಯವನ್ನು ಧರ್ಮಾಧಿಕರಣರು ಹೇಳಿಕೊಂಡರು. ನ್ಯಾಯ ತೀರ್ಮಾನಕ್ಕಾಗಿ ಧರ್ಮಾಧಿಕರಣರ ಬಳಿ ಬಂದಾಗ ದುಷ್ಟಬುದ್ಧಿಯು ಹೊನ್ನನೆಲ್ಲವನ್ನು ಈತನೇ ಕದ್ದುಕೊಂಡಿರುವುದಕ್ಕೆ ಸಾಕ್ಷಿ ಉಂಟು ಎಂದು ಹೇಳಿದನು. ಆಗ ಸಭೆಯ ಸದಸ್ಯರು ಸಾಕ್ಷಿಯನ್ನು ಹೇಳು ಎನ್ನಲು ದುಷ್ಟಬುದ್ಧಿಯು ಆ ಸ್ಥಳದಲ್ಲಿ ಹೊನ್ನನ್ನು ಇಡುವಾಗ ಈತನೂ ಮತ್ತು ನಾನು ಬಿಟ್ಟು ಬೇರೆ ಯಾರು ಮನುಷ್ಯರು ಇರಲಿಲ್ಲ. ಆ ಸ್ಥಳದಲ್ಲಿ ಇರುವ ವಟವೃಕ್ಷವೇ (ಆಲದಮರ) ಸಾಕ್ಷಿ ಎಂದಾಗ ಧರ್ಮಾಧಿಕರಣರು ವಿಸ್ಮಯಗೊಂಡು **"ಈತನ ಮಾತು ಅಶ್ರುತಪೂರ್ವಮ್"** (ಈತನ ಮಾತು ಈ ಮೊದಲು ಕೇಳಿಲ್ಲದ್ದು) ಈ ಆಶ್ಚರ್ಯವನ್ನು ನೋಡೋಣವೆಂದು ಧರ್ಮಬುದ್ಧಿಯನ್ನು ಕರೆದು ನೀನು ಈ ಸಾಕ್ಷಿಯನ್ನು ಒಪ್ಪಿಕೊಳ್ಳುವೆಯಾ? ಎಂದು ಕೇಳಿದ ಸಂದರ್ಭವಾಗಿದೆ.

**ಸ್ವಾರಸ್ಯ :** ವೃಕ್ಷ ಸಾಕ್ಷಿ ಹೇಳುವುದು ಎಂಬುದನ್ನು ಹಿಂದೆ ಎಂದೂ ಕೇಳಿಲ್ಲ ಎಂದು ಧರ್ಮಾಧಿಕರಣರು ವಿಸ್ಮಯ ಭಾವದಿಂದ ಈ ಮಾತನ್ನು ಹೇಳುವುದು ಬಹು ಸ್ವಾರಸ್ಯಪೂರ್ಣವಾಗಿದೆ.

**3. "ನಿನ್ನ ಪಟುವಗೆ ನಮ್ಮ ಕುಲಮನೆಲ್ಲಮನಟಿವ ಬಗೆ"**

**ಆಯ್ಕೆ :** ಈ ವಾಕ್ಯವನ್ನು **'ದುರ್ಗಸಿಂಹ ಕವಿ'** ವಿರಚಿತ **'ಪಂಚತಂತ್ರ'** ಎಂಬ ಕೃತಿಯಿಂದ ಆಯ್ದ **'ವೃಕ್ಷಸಾಕ್ಷಿ'** ಎಂಬ ಪಾಠದಿಂದ ಆರಿಸಲಾಗಿದೆ.

**ಸಂದರ್ಭ:** ಈ ಮಾತನ್ನು ದುಷ್ಟಬುದ್ಧಿಯ ತಂದೆ ಪ್ರೇಮಮತಿ ದುಷ್ಟಬುದ್ಧಿಗೆ ಹೇಳಿದನು. ದುಷ್ಟಬುದ್ಧಿಯು ತನ್ನ ತಂದೆಯ ಕೈಯನ್ನು ಹಿಡಿದು, ಏಕಾಂತದಲ್ಲಿ ಕರೆದುಕೊಂಡು ಹೋಗಿ ನಡೆದ ಸಂಗತಿಯನ್ನೆಲ್ಲ ತಿಳಿಯುವಂತೆ ಹೇಳಿ "ನಿಮ್ಮ ಒಂದು ಮಾತಿನಿಂದ ನಮ್ಮ ಪರಿಜನರೆಲ್ಲರೂ (ಮನೆಯವರೆಲ್ಲರೂ) ಹಲವು ಕಾಲ ಹಸಿಯದೆ ಊಟಮಾಡಿ ಬಾಳುವಷ್ಟು ಹಣವು ಲಭಿಸುವುದು. ನೀವು ಆ ಮರದ ಪೊಟರೆಯಲ್ಲಿ ಅವಿತುಕೊಂಡು ಧರ್ಮಬುದ್ಧಿಯೇ ಹೊನ್ನನ್ನು ತೆಗೆದುಕೊಂಡು ಹೋದನು ಎಂದು ಹೇಳಬೇಕು ಎಂದಾಗ ದುಷ್ಟಬುದ್ಧಿಯ ತಂದೆ "ಪರರಧನವನ್ನು ಅಪಹರಿಸುವುದು ನಂಬಿಕೆದ್ರೋಹಮಾಡುವುದು, ಸ್ವಾಮಿದ್ರೋಹ ಮಾಡುವುದು ಇವೆಲ್ಲವೂ ಏನೇ ಮಾಡಿದರೂ ನಮ್ಮನ್ನು ಕೆಡಿಸುತ್ತವೆ. ಇಂತಹದೆಲ್ಲವನ್ನು ನೀನು ತಿಳಿದಿದ್ದು ನನ್ನನ್ನು ಸಾಕ್ಷಿ ಮಾಡಿ ಮಾತನಾಡಿಸಿ, ನನ್ನನ್ನು ಕೆಡಿಸಲು ಬಯಸಿದೆ. **"ನಿನ್ನ ಪಟುವಗೆ ನಮ್ಮ ಕುಲಮನೆಲ್ಲಮನಟಿವ ಬಗೆ"** (ನಿನ್ನ ಕೆಟ್ಟಬುದ್ಧಿಯು ನಮ್ಮ ಕುಲವನ್ನೆಲ್ಲವನ್ನು (ಮನೆತನವನ್ನೆಲ್ಲ) ಹಾಳು ಮಾಡುವ ರೀತಿಯದಾಗಿದೆ)" ಎಂದು ದುಷ್ಟಬುದ್ಧಿಗೆ ಬುದ್ಧಿ ಹೇಳಿದ ಸಂದರ್ಭವಾಗಿದೆ.

**ಸ್ವಾರಸ್ಯ:** ಕೆಟ್ಟಬುದ್ಧಿಯು ಕುಲವನ್ನೆಲ್ಲ ಹಾಳು ಮಾಡುತ್ತದೆ ಎಂದು ಪ್ರೇಮಮತಿ ತನ್ನ ಮಗನಾದ ದುಷ್ಟಬುದ್ಧಿಗೆ ಬುದ್ಧಿಮಾತನ್ನು ಹೇಳುವುದು ಸ್ವಾರಸ್ಯಪೂರ್ಣವಾಗಿದೆ.

**4. "ಪ್ರಕೃತಿ ವಿಕೃತಿಯಾದ ಮನುಷ್ಯನಾಯುಷ್ಯಂ ಕುಂದುಗುಂ"**

**ಆಯ್ಕೆ :** ಈ ವಾಕ್ಯವನ್ನು **'ದುರ್ಗಸಿಂಹ ಕವಿ'** ವಿರಚಿತ **'ಪಂಚತಂತ್ರ'** ಎಂಬ ಕೃತಿಯಿಂದ ಆಯ್ದ **'ವೃಕ್ಷಸಾಕ್ಷಿ'** ಎಂಬ ಪಾಠದಿಂದ ಆರಿಸಲಾಗಿದೆ.

**ಸಂದರ್ಭ:** ಮರದ ಪೊಟರೆಯೊಳಗೆ ಅಡಗಿದ್ದ ದುಷ್ಟಬುದ್ಧಿಯ ತಂದೆ ಪ್ರೇಮಮತಿಯು ಬುದ್ಧಿಗೆಟ್ಟು, ಧರ್ಮಮಾರ್ಗವನ್ನು ಬಿಟ್ಟು **"ಪ್ರಕೃತಿ ವಿಕೃತಿಯಾದ ಮನುಷ್ಯನಾಯುಷ್ಯಂ ಕುಂದುಗುಂ"** (ಪ್ರಕೃತಿ ವಿಕೃತಿಯಾದ (ಸಹಜ ಗುಣ ಬದಲಾವಣೆಯಾದ) ಮನುಷ್ಯನ ಆಯುಷ್ಯವು ಕಡಿಮೆಯಾಗುತ್ತದೆ) ಎಂದು ಹೇಳುವಂತೆ ಧರ್ಮಬುದ್ಧಿಯೇ ಧನವನ್ನು ತೆಗೆದುಕೊಂಡನು ಎಂದು ಹೇಳಿದ ಸಂದರ್ಭವಾಗಿದೆ.

**ಸ್ವಾರಸ್ಯ :** ದುಷ್ಟಬುದ್ಧಿಯ ತಂದೆಯಾದ ಪ್ರೇಮಮತಿಯು ಹೇಳಿದ ಸುಳ್ಳು ಆತನ ಆಯುಷ್ಯವನ್ನು ಕಡಿಮೆ ಮಾಡಿತು ಎಂದು ಪರೋಕ್ಷವಾಗಿ ಕವಿ ಬಳಸಿರುವ ಈ ಮಾತು ಸ್ವಾರಸ್ಯಪೂರ್ಣವಾಗಿದೆ.

**5. "ಹುಸಿಯದ ಬೇಹಾರಿಯೇ ಇಲ್ಲ."**

**ಆಯ್ಕೆ:** ಈ ವಾಕ್ಯವನ್ನು **'ದುರ್ಗಸಿಂಹ ಕವಿ'** ವಿರಚಿತ **'ಪಂಚತಂತ್ರ'** ಎಂಬ ಕೃತಿಯಿಂದ ಆಯ್ದ **'ವೃಕ್ಷಸಾಕ್ಷಿ'** ಎಂಬ ಪಾಠದಿಂದ ಆರಿಸಲಾಗಿದೆ.

**ಸಂದರ್ಭ:** ಈ ಮಾತನ್ನು ಧರ್ಮಬುದ್ಧಿಯು ಧರ್ಮಾಧಿಕರಣರಿಗೆ ಹೇಳಿದನು. ಧರ್ಮಬುದ್ಧಿಯೇ ಧನವನ್ನು ತೆಗೆದುಕೊಂಡನು ಎಂದು ಹೇಳುವುದನ್ನು ಕೇಳಿದ ಧರ್ಮಬುದ್ಧಿಯು ಇದರಲ್ಲಿ ಏನಾದರೊಂದು ಮೋಸವಾಗಿರಲೇಬೇಕು ಎಂದು ಆ ಮರವನ್ನು ಸುತ್ತು ಹಾಕಿ ನೋಡಿ ದೊಡ್ಡದಾದ ಪೊಟರೆಯಲ್ಲಿ ಮನುಷ್ಯ ಸಂಚಾರವಾಗಿರುವುದನ್ನು ಕಂಡು ತೀರ್ಮಾನಿಸಿ ಧರ್ಮಬುದ್ಧಿಯು ಧರ್ಮಾಧಿಕಾರಿಗಳಿಗೆ ಹೀಗೆ ಹೇಳಿದನು. **"ಹುಸಿಯದ ಬೇಹಾರಿಯೇ ಇಲ್ಲ."** (ಸುಳ್ಳು ಹೇಳದ ವ್ಯಾಪಾರಿಯೇ ಇಲ್ಲ) ನಾನು ವ್ಯಾಪಾರಿ ಆಗಿರುವುದರಿಂದ ನಮ್ಮ ವೃತ್ತಿಧರ್ಮಕ್ಕೆ ಧರ್ಮಬುದ್ಧಿಯು ಅಧರ್ಮಬುದ್ಧಿಯಾಗಿ ಧನವನ್ನು ವಂಚನೆಯಿಂದ ತೆಗೆದುಕೊಂಡು ಹೋದೆನು ಎಂದು ದುಷ್ಟಬುದ್ಧಿಯ ತಂತ್ರವನ್ನು ಬಯಲು ಮಾಡುವ ಸಂದರ್ಭವಾಗಿದೆ.

**ಸ್ವಾರಸ್ಯ:–** ವ್ಯಾಪಾರಿಗಳು ವೃತ್ತಿಧರ್ಮದಲ್ಲಿ ಕೆಲವೊಂದು ಸಲ ಸುಳ್ಳು ಹೇಳುತ್ತಾರೆ ಎಂಬು ಲೋಕರೂಢಿಯ ಮಾತು ಬಹು ಸ್ವಾರಸ್ಯಪೂರ್ಣವಾಗಿ ಇಲ್ಲಿ ಮೂಡಿಬಂದಿದೆ.

**ಉ) ಮೊದಲೆರಡು ಪದಗಳಿರುವ ಸಂಬಂಧದಂತೆ ಮೂರನೆಯ ಪದಕ್ಕೆ ಸಂಬಂಧಿಸಿದ ಪದವನ್ನು ಬರೆಯಿರಿ.**

1) ವಡ್ಡಾರಾಧನೆ : : ಶಿವಕೋಟ್ಯಾಚಾರ್ಯ : : ಪಂಚತಂತ್ರ : **ದುರ್ಗಸಿಂಹ**
2) ಕಬ್ಬ : ಕಾವ್ಯ : : ಬೇಹಾರಿ : **ವ್ಯಾಪಾರಿ**
3) ಅನೃತ : ಸುಳ್ಳು : : ಕೃತ್ರಿಮ : **ಮೋಸ, ವಂಚನೆ**
4) ಬಂದಲ್ಲದೆ : ಲೋಪಸಂಧಿ : : ಧೃತಿಗೆಟ್ಟು : **ಆದೇಶ ಸಂಧಿ**
5) ದೈವಭಕ್ತಿ – ತತ್ಪುರುಷ ಸಮಾಸ : : ಅಬ್ಜೋದರ : **ಬಹುವ್ರೀಹಿ ಸಮಾಸ**

## ಭಾಷಾ ಚಟುವಟಿಕೆ

**1. ಈ ಪದಗಳನ್ನು ಬಿಂಗಡಿಸಿ ಸಂಧಿಯ ಹೆಸರು ಬರೆಯಿರಿ.**

| | | | | | | |
|---|---|---|---|---|---|---|
| ಪೋಗಲ್‌ವೇಟ್ಟುಂ | = | ಪೋಗಲ್ | + | ಪೇಟ್ಟುಂ | – | ಆದೇಶ ಸಂಧಿ |
| ತಕ್ಕನಿತು | = | ತಕ್ಕ | + | ಅನಿತು | – | ಲೋಪಸಂಧಿ |
| ಪೂಟ್ಟಿಡೆ | = | ಪೂಟ್ಟಿ | + | ಎಡೆ | – | ಲೋಪಸಂಧಿ |

**2. ಕೊಟ್ಟಿರುವ ಪದಗಳನ್ನು ವಿಗ್ರಹಿಸಿ ಸಮಾಸವನ್ನು ಹೆಸರಿಸಿ.**

ಅತಿಕುಟಿಲ, ಕೈಕೊಳ್ವುದು, ಕಟ್ಟೇಕಾಂತ, ಸ್ವಾಮಿದ್ರೋಹ, ಪರಧನ, ಧನಹರಣ, ಸಾಕ್ಷಿಮಾಡಿ, ಬಲವಂದು.

| | | | | | | |
|---|---|---|---|---|---|---|
| **ಅತಿಕುಟಿಲ** | = | ಅತಿಯಾದ | + | ಕುಟಿಲ | – | ಕರ್ಮಧಾರಯ ಸಮಾಸ |
| **ಕೈಕೊಳ್ವುದು** | = | ಕೈಯನ್ನು | + | ಕೊಳ್ವುದು | – | ಕ್ರಿಯಾ ಸಮಾಸ |
| **ಕಟ್ಟೇಕಾಂತ** | = | ಕಡಿದು | + | ಏಕಾಂತ | – | ಕರ್ಮಧಾರಯ ಸಮಾಸ |
| **ಸ್ವಾಮಿದ್ರೋಹ** | = | ಸ್ವಾಮಿಗೆ | + | ದ್ರೋಹ | – | ತತ್ಪುರಷ ಸಮಾಸ |
| **ಪರಧನ** | = | ಪರರ | + | ಧನ | – | ತತ್ಪುರಷ ಸಮಾಸ |
| **ಧನಹರಣ** | = | ಧನದ | + | ಹರಣ | – | ತತ್ಪುರಷ ಸಮಾಸ |
| **ಸಾಕ್ಷಿಮಾಡಿ** | = | ಸಾಕ್ಷಿಯನ್ನು | + | ಮಾಡಿ | – | ಕ್ರಿಯಾ ಸಮಾಸ |
| **ಬಲವಂದು** | = | ಬಲಕ್ಕೆ | + | ಬಂದು | – | ಕ್ರಿಯಾ ಸಮಾಸ |

**3. ಕೊಟ್ಟಿರುವ ಪದ್ಯಭಾಗಕ್ಕೆ ಪ್ರಸ್ತಾರ ಹಾಕಿ ಛಂದಸ್ಸನ್ನು ಹೆಸರಿಸಿ ಲಕ್ಷಣ ಬರೆಯಿರಿ.**

**ಅ) ಅತಿಕುಟಿಲಮನಂ ಧನಲು**
**ಬ್ಧತೆಯಿಂದಂ ದುಷ್ಟಬುದ್ಧಿ ನುಡಿದಂ ಪುಸಿಯಂ**

| 4 | 4 | 4 |
|---|---|---|
| ∪∪∪∪ | ∪ ∪– | ∪∪– |
| ಅತಿಕುಟಿ | ಲ ಮನಂ | ಧನಲು |

| 4 | 4 | 4 | 4 | 4 |
|---|---|---|---|---|
| ∪ ∪ – | – – | ∪ – ∪ | ∪ ∪ – | ∪ ∪ – |
| ಬ್ಧತೆಯಿಂ | ದಂದು | ಷ್ಟಬುದ್ಧಿ | ನುಡಿದಂ | ಪುಸಿಯಂ |

**ಛಂದಸ್ಸು – ಕಂದ ಪದ್ಯ**

**ಲಕ್ಷಣ:** ಒಂದನೇ ಸಾಲಿನಲ್ಲಿ 4 ಮಾತ್ರೆಯ 3 ಗಣಗಳು ಮತ್ತು ಎರಡನೆಯ ಸಾಲಿನಲ್ಲಿ 4 ಮಾತ್ರೆಯ 5 ಗಣಗಳು ಬಂದಿದ್ದು ಕಂದಪದ್ಯದ ಪೂರ್ವಾರ್ಧದ ಲಕ್ಷಣ ಹೊಂದಿರುವುರಿಂದ ಇದು ಕಂದಪದ್ಯ ಛಂದಸ್ಸಾಗಿದೆ.

**ಆ) ಮೇದಿನಿಯಂ ಕ್ರಮಕ್ರಮದೆ ಪರ್ವಿದುದಾತ್ತನಭೋ ವಿಭಾಗಮಾ**

| ಭ | ರ | ನ | ಭ | ಭ | ರ | ಲಗ |
|---|---|---|---|---|---|---|
| – ∪∪ | – ∪ – | ∪∪∪ | –∪∪ | –∪∪ | – ∪ – | ∪– |
| ಮೇದಿನಿ | ಯಂ ಕ್ರಮ | ಕ್ರಮದೆ | ಪರ್ವಿದು | ದಾತ್ತನ | ಭೋವಿಭಾ | ಗಮಾ |

**ಛಂದಸ್ಸು – ಉತ್ಪಲ ಮಾಲಾ ವೃತ್ತ**

**ಲಕ್ಷಣ:** ಈ ಪಾದದಲ್ಲಿ 20 ಅಕ್ಷರಗಳು, 28 ಮಾತ್ರೆಗಳು, ಭರನಭಭರಲಗ ಗಣಗಳು ಹಾಗೂ ಪಾದದ ಆದಿಯಲ್ಲಿ ಒಂದು ಗುರುಬಂದಿದ್ದು ಇದು ಉತ್ಪಲ ಮಾಲಾ ವೃತ್ತ ಛಂದಸ್ಸಿನ ಲಕ್ಷಣವನ್ನು ಹೊಂದಿದೆ. ಆದ್ದರಿಂದ ಇದು ಉತ್ಪಲ ಮಾಲಾ ವೃತ್ತ ಛಂದಸ್ಸಾಗಿದೆ.

ಸತ್ಯಂ ಶಿವಂ ಸುಂದರಂ